ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ-285

**29 ಜನವರಿ 2022 * ಶನಿವಾರ * ಸಂಜೆ 6.00**

## ಡಿಜಿಟಲ್ ಕಾರ್ಯಕ್ರಮ

ದಿವ್ಯ ಸಾನ್ನಿಧ್ಯ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ
ಸುತ್ತೂರು ಶ್ರೀಕ್ಷೇತ್ರ

**ಉಪನ್ಯಾಸ**



**ಡಾ. ವಿಶ್ವನಾಥ್**
ಪ್ರಾಧ್ಯಾಪಕರು, ಕನ್ನಡ ವಿಭಾಗ
ಸಿ.ಐ.ಎಲ್.ಎಸ್.ಎಲ್.ಎಲ್. ಮತ್ತು ಸಿ.ಎಸ್.
ಜವಹರಲಾಲ್ ನೆಹರು ವಿಶ್ವವಿದ್ಯಾನಿಲಯ, ನವದೆಹಲಿ

**ವಿಷಯ: ದೇವರ ದಾಸಿಮಯ್ಯನ ವಚನಗಳು**
(ಉಪನ್ಯಾಸದ ನಂತರ ಆನ್‌ಲೈನ್‌ನಲ್ಲಿ ಬರುವ ಪ್ರಶ್ನೆಗಳಲ್ಲಿ ಆಯ್ದವುಗಳಿಗೆ ಉತ್ತರಿಸಲಾಗುವುದು)

ಆನ್‌ಲೈನ್ ಮೂಲಕ ನೇರವಾಗಿ ವೀಕ್ಷಿಸಲು ಹಾರ್ದಿಕ ಸ್ವಾಗತ

LIVE STREAMING

https://www.facebook.com/JSSMVP

ಶ್ರೀಮತ್ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಹಲವಾರು ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ನಡೆಸುತ್ತಿದ್ದರು. 1986 ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಗಳನ್ನು ಸ್ಥಾಪಿಸಿ ಆ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ದಿನಾಂಕ 12.5.1996 ರಂದು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಡಾ. ವಿಶ್ವನಾಥ್‌ರವರು** ನವದೆಹಲಿಯ ಜವಹಾರ್‌ಲಾಲ್ ನೆಹರೂ ವಿಶ್ವವಿದ್ಯಾಲಯದಲ್ಲಿ ಕನ್ನಡ, ಭಾಷೆ, ಸಾಹಿತ್ಯ ಹಾಗೂ ಸಾಂಸ್ಕೃತಿಕ ಅಧ್ಯಯನ ವಿಭಾಗದ ಪ್ರಾಧ್ಯಾಪಕರು. ಜನ್ಮಸ್ಥಳ ಮೈಸೂರು. ಮೈಸೂರು ವಿಶ್ವವಿದ್ಯಾನಿಲಯದಿಂದ ಕನ್ನಡದಲ್ಲಿ ಚಿನ್ನದ ಪದಕಗಳೊಂದಿಗೆ ಸ್ನಾತಕೋತ್ತರ ಪದವಿ ಹಾಗೂ ಪಿಎಚ್.ಡಿ ಪದವಿ ಪಡೆದಿರುವರು.

ಮೂರು ದಶಕಗಳಿಗೂ ಹೆಚ್ಚು ಕಾಲದ ಬೋಧನಾನುಭವವನ್ನು ಹೊಂದಿರುವರು. ಮೈಸೂರು ವಿಶ್ವವಿದ್ಯಾನಿಲಯದ ಮಹಾರಾಜ ಕಾಲೇಜು, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯಲ್ಲಿ ಪ್ರಾಧ್ಯಾಪಕರಾಗಿ ಹಾಗೂ ಉಪಕುಲಸಚಿವರಾಗಿ ಕಾರ್ಯನಿರ್ವಹಿಸಿದ್ದಾರೆ. 15ಕ್ಕೂ ಹೆಚ್ಚು ಸಂಶೋಧನಾ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿರುವರು. ಉತ್ತಮ ವಾಗ್ಮಿಗಳು ಹಾಗೂ ಬರಹಗಾರರು. ಗ್ರಾಮಗಳ ಸಾಂಸ್ಕೃತಿಕ ಪರಿವೇಷ, ರನ್ನನ ಗದಾಯುದ್ಧ ಕಥಾಸಾರ, ಎರಡು ಹರಬಿ ನೀರು, ಛಂದೋ ಕೈಪಿಡಿ, ಕಾಯಕ ಪರಿಕಲ್ಪನೆ, ಗ್ರಾಮನಾಮ ದೀಪಿಕೆ, ಕಾವ್ಯ ವಿಮರ್ಶೆ, ಸಂವೇದನೆ, ಅಭಿಜಾತ ಸೇರಿದಂತೆ ಹಲವಾರು ಸಂಶೋಧನಾ ಕೃತಿಗಳನ್ನು ರಚಿಸಿದ್ದಾರೆ. ಹಾಸನ ಜಿಲ್ಲಾ ಐದನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದರು. ಹಲವಾರು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ವಿಚಾರಸಂಕಿರಣಗಳಲ್ಲಿ ಸಂಶೋಧನಾ ಪ್ರಬಂಧಗಳನ್ನು ಮಂಡಿಸಿದ್ದಾರೆ.